**ಸಾಕ್ಷಿಯನ್ನು ದಿನಾಂಕ: 27-09-2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಈ ದಿನ ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ. ಸದರಿ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳನ್ನು ವಕೀಲರು ನನಗೆ ಓದಿ ತಿಳಿಸಿರುತ್ತಾರೆ. ಆದ್ದರಿಂದ, ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆ ಎಂದು ಪರಿಗಣಿಸಬೇಕಾಗಿ ಕೋರುತ್ತೇನೆ.

**ಮುಂದುವರೆದ ಮುಖ್ಯ ವಿಚಾರಣೆ :- ವಾದಿ ಪರ ವಕೀಲರಾದ ಶ್ರೀ ಆನಂದ ವಾಯ್ ರವರಿಂದ:**

ಪ್ರತಿವಾದಿಗಳು ವಾದಿಗಳ ಪರವಾಗಿ ಬರೆದುಕೊಟ್ಟಿರುವ ಕರಾರು ಪತ್ರವನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನಿಪಿ-1 ಕರಾರು ಪತ್ರವನ್ನು ಗುರುತಿಸಿರುತ್ತಾರೆ.

ನಿಪಿ-1 ಕ್ಕೆ ವಾದಿ, 3 ರಿಂದ 5 ನೇಪ್ರತಿವಾದಿಗಳು ಸಹಿಗಳನ್ನು ಮಾಡಿದ್ದು, 1 ಮತ್ತು 2 ನೇ ಪ್ರತಿವಾದಿಗಳು ಹೆಬ್ಬೆಟ್ಟಿನ ಗುರುತುಗಳನ್ನು ಹಾಕಿರುತ್ತಾರೆ. ನಿಪಿ-1 ಕ್ಕೆ ಸಾಕ್ಷಿಯಾಗಿ ಸಹಿ ಮಾಡಿರುತ್ತೇನೆ. ಅವುಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನಿಪಿ-1 ರ ಮೇಲಿರುವ ವಾದಿ ಹಾಗೂ 3 ರಿಂದ 5 ನೇ ಪ್ರತಿವಾದಿಗಳು ಮತ್ತು ತನ್ನ ಸಹಿಗಳನ್ನು ಗುರುತಿಸಿರುತ್ತಾರೆ. ನಿಪಿ-1 ರ 5 ನೇ ಪುಟದಲ್ಲಿರುವ ಸದರಿ ಸಹಿಗಳನ್ನು ಕ್ರಮವಾಗಿ ನಿಪಿ-1(ಎ) ಯಿಂದ ನಿಪಿ-1(ಇ) ಎಂದು ಗುರುತಿಸಲಾಯಿತು.

ನಿಪಿ-1 ರ ಮೇಲಿನ 1 ಮತ್ತು ಮತ್ತು 2 ನೇ ಪ್ರತಿವಾದಿಗಳ ಹೆಬ್ಬೆಟ್ಟಿನ ಗುರುತುಗಳು ಎಂದು ಹೇಳಲಾಗುವ ಹೆಬ್ಬೆಟ್ಟಿನ ಗುರುತುಗಳನ್ನು ನಿಪಿ-1(ಎಫ್) ಮತ್ತು ನಿಪಿ-1(ಜಿ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ನಾನಲ್ಲದೆ ಇತರೆ ಮೂರು ಜನ ಸಾಕ್ಷಿಗಳಾಗಿ ಸಹಿ ಮಾಡಿರುತ್ತಾರೆ.

**ಪಾಟೀ ಸವಾಲು :-** ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರುಹಾಜರು. ಆದ್ದರಿಂದ, ಪ್ರತಿವಾದಿಗಳ ಪರ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿರುತ್ತಾರೆ,**

**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ದೇವನಹಳ್ಳಿ.**